# ಕರ್ನಾಟಕ ವಿಧಾನ ಪರಿಷತ್ತು

ಸಂಖ್ಯೆ:ಕವಿಪ:ಆ-1:177:ನೇಮಕ/2015-24

ವಿಧಾನ ಪರಿಷತ್ತಿನ ಸಚಿವಾಲಯ,
ಅಂಚೆ ಪೆಟ್ಟಿಗೆ ಸಂಖ್ಯೆ:5079, ವಿಧಾನ ಸೌಧ,
ಬೆಂಗಳೂರು-560 001, **ದಿನಾಂಕ:30.08.2024**

## ಅಧಿಕೃತ ಜ್ಞಾಪನ

ವಿಷಯ: ವಿಧಾನ ಪರಿಷತ್ತಿನ ಶಾಸಕರ ಭವನದ ಪಂಚಕರ್ಮ ವಿಭಾಗಕ್ಕೆ ಥೆರಪಿಸ್ಟ್ ಹುದ್ದೆಗಳನ್ನು ಗುತ್ತಿಗೆ ಆಧಾರದ ಮೇಲೆ ನೇಮಕ ಮಾಡುವ ಬಗ್ಗೆ.

ಉಲ್ಲೇಖ: 1. ಮಾನ್ಯ ಸಭಾಪತಿಯವರ ಟಿಪ್ಪಣಿ ಸಂಖ್ಯೆ:ಕವಿಪ:ಸಕಾ:785:2023, ದಿನಾಂಕ:19.07.2023.

2. ಆರ್ಥಿಕ ಇಲಾಖೆಯ ಪತ್ರ ಸಂಖ್ಯೆ:ಆಇ:479:ವೆಚ್ಚ-10:2022, ದಿನಾಂಕ:12.12.2023.

3.ಆದೇಶ ಸಂಖ್ಯೆ:ಕವಿಪ:ಆ-1:54:ಶಾಭಪಂಚಕರ್ಮವಿಭಾಗ:2024, ಬೆಂಗಳೂರು, ದಿನಾಂಕ:18.01.2024.

*******

ಕರ್ನಾಟಕ ವಿಧಾನ ಪರಿಷತ್ತಿನ ಸಚಿವಾಲಯದ ಶಾಸಕರ ಭವನದ ಪಂಚಕರ್ಮ ವಿಭಾಗಕ್ಕೆ ಶ್ರೀ ನವೀನ್ ಕುಮಾರ್ ಸಿ., ಇವರನ್ನು ಮಾಸಿಕ ರೂ.25,000/-ಗಳ ಸಂಚಿತ ವೇತನದೊಂದಿಗೆ ತಕ್ಷಣದಿಂದ ಜಾರಿಗೆ ಬರುವಂತೆ ಕರ್ನಾಟಕ ವಿಧಾನ ಪರಿಷತ್ತಿನ ಸಚಿವಾಲಯವು ಇವರ ಸೇವೆಯನ್ನು ಇಚ್ಛಿಸುವವರೆಗೆ ಅಥವಾ ಈ ಅಧಿಕೃತ ಜ್ಞಾಪನವನ್ನು ಹೊರಡಿಸಿದ ದಿನಾಂಕದಿಂದ ಹನ್ನೊಂದು ತಿಂಗಳವರೆಗೆ, ಇವುಗಳಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ಈ ಅಧಿಕೃತ ಜ್ಞಾಪನ ಪತ್ರದ ಅನುಬಂಧದಲ್ಲಿರುವ ನಿಬಂಧನೆ ಮತ್ತು ಷರತ್ತುಗಳಿಗೊಳಪಡಿಸಿದಂತೆ ಗುತ್ತಿಗೆ ಆಧಾರದ ಮೇಲೆ ಥೆರಫಿಸ್ಟ್ ಹುದ್ದೆಗೆ ನೇಮಕ ಮಾಡಲಾಗಿದೆ.

ಮಾನ್ಯ ಸಭಾಪತಿಯವರ ಆದೇಶಾನುಸಾರ,

(ಅನಸೂಯಮ್ಮ)
ಅಧೀನ ಕಾರ್ಯದರ್ಶಿ,
ಕರ್ನಾಟಕ ವಿಧಾನ ಪರಿಷತ್ತು.

ಗೆ:

ಶ್ರೀ ನವೀನ್ ಕುಮಾರ್ ಸಿ., ಕುಲವನಹಳ್ಳಿ, ನೆಲಮಂಗಲ ತಾಲ್ಲೂಕು, ಸುಲಕುಂಟೆ,ಕುಲವನಹಳ್ಳಿ, ಬೆಂಗಳೂರು ಗ್ರಾಮಾಂತರ-562111.

**ಪ್ರತಿಗಳು:**

1. ಮಾನ್ಯ ಸಭಾಪತಿಯವರ ಆಪ್ತ ಕಾರ್ಯದರ್ಶಿಯವರಿಗೆ, ಕವಿಪ.
2. ಕಾರ್ಯದರ್ಶಿಯವರ ಪತ್ರಾಂಕಿತ ಆಪ್ತ ಸಹಾಯಕರಿಗೆ, ಕವಿಪ.
3. ಅಪರ ಕಾರ್ಯದರ್ಶಿಯವರ ಆಪ್ತ ಸಹಾಯಕರಿಗೆ, ಕವಿಪ.
4. ಉಪ ಕಾರ್ಯದರ್ಶಿ/ಅಧೀನ ಕಾರ್ಯದರ್ಶಿ/ಶಾಖಾಧಿಕಾರಿ, ಆಡಳಿತ ಶಾಖೆ/ಲೆಕ್ಕಪತ್ರ ಶಾಖೆ-2, ಕವಿಪ.
5. ಆರ್ಥಿಕ ಅಧಿಕಾರಿ, ಆಯವ್ಯಯ ಶಾಖೆ, ಕವಿಪ.
6. ಖಜಾನಾಧಿಕಾರಿ, ರಾಜ್ಯ ಹುಜೂರು ಖಜಾನೆ, ಬೆಂಗಳೂರು.
7. ಅಧೀನ ಕಾರ್ಯದರ್ಶಿ/ಶಾಖಾಧಿಕಾರಿ, ಗಣಕ ಕೇಂದ್ರ, ಕವಿಪ.
8. ಸಂಬಂಧಪಟ್ಟ ಕಡತಕ್ಕೆ/ರಕ್ಷಾ ಕಡತಕ್ಕೆ/ಬಿಡಿ ಪ್ರತಿ.

**ಅನುಬಂಧ**

**ಒಪ್ಪಂದದ ನೇಮಕಾತಿಯ ನಿಬಂಧನೆ ಹಾಗೂ ಷರತ್ತುಗಳು:**

01. **ಶ್ರೀ ನವೀನ್ ಕುಮಾರ್ ಸಿ.,. ಥೆರಫಿಸ್ಟ್,** ಇವರ ಗುತ್ತಿಗೆ ನೇಮಕಾತಿ ಅವಧಿಯು **ದಿನಾಂಕ:30.08.2024**ರಿಂದ ಜಾರಿಗೆ ಬರುವಂತೆ ಕರ್ನಾಟಕ ವಿಧಾನ ಪರಿಷತ್ತಿನ ಸಚಿವಾಲಯವು ಇವರ ಸೇವೆಯನ್ನು ಇಚ್ಛಿಸುವವರೆಗೆ ಅಥವಾ ಹನ್ನೊಂದು ತಿಂಗಳ ಅವಧಿಗೆ ಇದ್ದು, ಇದೊಂದು ತಾತ್ಕಾಲಿಕ ನೇಮಕಾತಿ ಆಗಿರುತ್ತದೆ.

02. ಇವರ ಗುತ್ತಿಗೆಯ ನೇಮಕಾತಿಗೆ ಮಾಸಿಕ **ರೂ.25,000/-ಗಳ** ಸಂಚಿತ ವೇತನವನ್ನು ನಿಗದಿಪಡಿಸಲಾಗಿದೆ. ಇದಲ್ಲದೆ ಇನ್ನಿತರೆ ಯಾವುದೇ ಭತ್ಯೆಗಳಿಗೂ ಇವರು ಅರ್ಹರಾಗಿರುವುದಿಲ್ಲ.

03. ಸದರಿ ಗುತ್ತಿಗೆ ನೌಕರರು ವಾರ್ಷಿಕ 10 ದಿನಗಳ ಸಾಂದರ್ಭಿಕ ರಜೆಯನ್ನು ಮಾತ್ರ ಪಡೆಯಲು ಅರ್ಹರಾಗಿರುತ್ತಾರೆ.

04. ಒಪ್ಪಂದದ ಷರತ್ತು ಮತ್ತು ನಿಬಂಧನೆಗಳಲ್ಲಿ ನೀಡಿರುವ ಸೌಲಭ್ಯಗಳ ಹೊರತಾಗಿ ಬೇರಾವುದೇ ಸೌಲಭ್ಯಕ್ಕೆ ಅಂದರೆ ವೇತನ ಬಡ್ತಿ, ಪದೋನ್ನತಿ, ಪಿಂಚಣಿ ಇತ್ಯಾದಿ ಸೌಲಭ್ಯಗಳಿಗೆ ಸದರಿ ಗುತ್ತಿಗೆ ನೌಕರರು ಅರ್ಹರಾಗಿರುವುದಿಲ್ಲ.

05. ಸದರಿ ನೌಕರರ ದುರ್ವರ್ತನೆ, ನಿರ್ಲಕ್ಷತೆಯ ನಿಮಿತ್ತ ಸರ್ಕಾರಕ್ಕೆ ಸಂಬಂಧಿಸಿಬಹುದಾದ ಎಲ್ಲಾ ನಷ್ಟಗಳನ್ನು ಸರ್ಕಾರಕ್ಕೆ ಸದರಿ ನೌಕರರು ಭರಿಸಿಕೊಡಲು ಬದ್ಧರಾಗಿರತಕ್ಕದ್ದು.

06. ಸದರಿ ಗುತ್ತಿಗೆ ನೇಮಕಾತಿಯನ್ನು ಯಾವುದೇ ಕಾರಣಕ್ಕೂ ಖಾಯಂ ಎಂದು ಪರಿಗಣಿಸುವುದಿಲ್ಲ.

07. ಇವರು ಕರ್ತವ್ಯ, ಕಾರ್ಯ ಮತ್ತು ಪ್ರಕಾರ್ಯಗಳನ್ನು ಶ್ರದ್ಧೆ, ಭಕ್ತಿ ಮತ್ತು ಆಸಕ್ತಿಯಿಂದ ನೆರವೇರಿಸತಕ್ಕದ್ದು.

08. ಇವರು ಕರ್ತವ್ಯವನ್ನು ಪಾಲಿಸುತ್ತಿರುವಾಗ ಅಥವಾ ನೆರವೇರಿಸುತ್ತಿರುವಾಗ ಇವರಿಗೆ ಲಭ್ಯವಾಗಬಹುದಾದ ಅಥವಾ ದೊರಕಬಹುದಾದ ಅಧಿಕೃತ ಮಾಹಿತಿಯನ್ನು ಗೌಪ್ಯವಾಗಿಟ್ಟು ಕಟ್ಟುನಿಟ್ಟಾಗಿ ಪಾಲಿಸಬೇಕು.

09. 1966 ರ ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಾವಳಿ ಮತ್ತು 1957 ರ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗೆ ಇವರು ಬದ್ಧರಾಗಿರುತ್ತಾರೆ.

10. ಈ ಒಪ್ಪಂದದ ಷರತ್ತುಗಳನ್ನು ಉಲ್ಲಂಘಿಸಿದಲ್ಲಿ ಗುತ್ತಿಗೆ ನೇಮಕಾತಿ ತಾನಾಗಿಯೇ ರದ್ದಾಗತಕ್ಕದ್ದು. ಇವರ ದುರ್ನಡತೆಯಿಂದಾಗಲೀ ಅಥವಾ ನಿರ್ಲಕ್ಷತೆ, ಉದಾಸೀನತೆಯಿಂದಾಗಲಿ ಮತ್ತು ಸರ್ಕಾರಕ್ಕೆ ಸಂಬಂಧಿಸಿದಂತೆ ಆರ್ಥಿಕ ನಷ್ಟವನ್ನು ಇವರು ಸರ್ಕಾರಕ್ಕೆ ತುಂಬಿಕೊಡಲು ಹೊಣೆಯಾಗಿರುತ್ತಾರೆ.

11. ಸದರಿ ನೌಕರರು, **ಕರ್ನಾಟಕ ವಿಧಾನ ಪರಿಷತ್ತಿನಿಂದ ಪಡೆದ ಗುರುತಿನ ಚೀಟಿಯನ್ನು ಸೇವೆಯಿಂದ ವಿಮುಕ್ತಿಗೊಳಿಸಿದ ತಕ್ಷಣ ವಿಧಾನ ಪರಿಷತ್ತಿನ ಕಾರ್ಯಕಾರಿ ಶಾಖೆಯ ಶಾಖಾಧಿಕಾರಿಯವರಿಗೆ ಹಿಂದಿರುಗಿಸತಕ್ಕದ್ದು, ಹಿಂದಿರುಗಿಸದಿದ್ದಲ್ಲಿ ನಿಯಮಾನುಸಾರ ಪೋಲೀಸ್ ಠಾಣೆಗೆ ದೂರು ದಾಖಲಿಸಲಾಗುವುದು.**

12. ಈ ಆದೇಶವನ್ನು ಸ್ವೀಕರಿಸಿದ ದಿನಾಂಕದಿಂದ ಏಳು ದಿನಗಳ ಒಳಗಾಗಿ **ರೂ.100/-**(ನೂರು ರೂಪಾಯಿ)ಗಳ ಮೌಲ್ಯದ ಛಾಪಾ ಕಾಗದದಲ್ಲಿ ಸದರಿ ನೇಮಕಾತಿಯ ಷರತ್ತು ಮತ್ತು ನಿಬಂಧನೆಗಳನ್ನು ಒಳಗೊಂಡಿರುವ ಕರಾರು ಪತ್ರವನ್ನು ಕ್ರಮಬದ್ಧ ರೀತಿಯಲ್ಲಿ ಸದರಿ ನೌಕರರು ತಮ್ಮ ಒಪ್ಪಿಗೆಯನ್ನು ನಮೂದಿಸಿ ಸಲ್ಲಿಸತಕ್ಕದ್ದು.

(ಅನಸೂಯಮ್ಮ)
ಅಧೀನ ಕಾರ್ಯದರ್ಶಿ,
ಕರ್ನಾಟಕ ವಿಧಾನ ಪರಿಷತ್ತು.